# ಮುಖ್ಯ ಚುನಾವಣಾಧಿಕಾರಿಗಳ ಕಛೇರಿ, ಕರ್ನಾಟಕ

ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560001. ದೂರವಾಣಿ : 080-22224212

ಸಂ:ಸಿಅಸುಇ /06/ಮಾಸ/2018 ದಿನಾಂಕ: 12-04-2018

## ಪತ್ರಿಕಾ ಟಿಪ್ಪಣಿ

ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಂದ ಸಂಗ್ರಹಿಸಿದ ಮಾಹಿತಿಯ ಆಧಾರದ ಮೇಲೆ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಮತ್ತು ಕಾನೂನು ಮತ್ತು ಸುವ್ಯವಸ್ಥೆ ಜಾರಿ ಕುರಿತಾದ ಮಾಹಿತಿಯನ್ನು ಒದಗಿಸಲಾಗಿದೆ.

**ಮಾದರಿ ನೀತಿ ಸಂಹಿತೆ**

1,156 ಫ್ಲೈಯಿಂಗ್ ಸ್ಕ್ವಾಡ್ಸ್ ಮತ್ತು 1,255 ಸ್ಟಾಟಿಕ್ ಸರ್ವೆಲೆನ್ಸ್ ಟೀಮ್ಸ್‌ಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ. ಮಾದರಿ ನೀತಿ ಸಂಹಿತೆ ಜಾರಿಗಾಗಿ ರಚಿಸಿದ ಫ್ಲೈಯಿಂಗ್ ಸ್ಕ್ವಾಡ್ಸ್ ಮತ್ತು ಇತರೆ ಮಾದರಿ ನೀತಿ ಸಂಹಿತೆ ತಂಡಗಳು 12537 ಗೋಡೆಬರಹಗಳು, 17693 ಪೋಸ್ಟರ್‌ಗಳು ಮತ್ತು 7,711 ಬ್ಯಾನರ್‌ಗಳನ್ನು ಸಾರ್ವಜನಿಕ ಸ್ಥಳಗಳಿಂದ ತೆಗೆದುಹಾಕಲಾಗಿದೆ ಹಾಗೂ Karnataka Open Places (Provision of Disfigurement) Act 1981 ಪ್ರಕಾರ 6 ಪ್ರಕರಣಗಳನ್ನು ನೋಂದಾಯಿಸಲಾಗಿದೆ. ಖಾಸಗಿ ಜಾಗಗಳಲ್ಲಿ ಒಟ್ಟಾರೆ 6,866 ಗೋಡೆ ಬರಹ, 7,949 ಪೋಸ್ಟರ್‌ಗಳು ಮತ್ತು 2,543 ಬ್ಯಾನರ್‌ಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ತೆಗೆದುಹಾಕಲಾಗಿದೆ.

ಇದಲ್ಲದೇ, ಕಳೆದ 24 ಗಂಟೆಗಳಲ್ಲಿ 4,58,16,060/- ರೂ.ಗಳ ನಗದು ಸೇರಿದಂತೆ ಎರಡು ವಾಹನಗಳನ್ನು ಸ್ಟಾಟಿಕ್ ಸರ್ವೆಲೆನ್ಸ್ ತಂಡಗಳು ವಶಪಡಿಸಿಕೊಂಡಿದೆ. ಒಟ್ಟಾರೆ, ಸ್ಟಾಟಿಕ್ ಸರ್ವೆಲೆನ್ಸ್ ತಂಡಗಳು ರೂ. 8,75,11,130/- ನಗದು, ರೂ. 1,70,80,000/- ಮೌಲ್ಯದ 7 ಕೆ.ಜಿ. 303 ಗ್ರಾಂ ಚಿನ್ನ, ರೂ. 11,47,200/- ಮೌಲ್ಯದ ಬೆಳ್ಳಿ, 54 ಸೀರೆಗಳು, 4.5 ಲೀಟರ್ ಮದ್ಯ, ವಾಹನಗಳು ಮತ್ತಿತರ ವಸ್ತುಗಳು ಸೇರಿದಂತೆ ರೂ. 1,32,32,772/- ಮೌಲ್ಯದ ವಸ್ತುಗಳನ್ನು ಮುಟ್ಟುಗೋಲು ಹಾಕಿಕೊಂಡಿವೆ.

ಅಲ್ಲದೇ, ಕಳೆದ 24 ಗಂಟೆಗಳಲ್ಲಿ ಫ್ಲೈಯಿಂಗ್ ಸ್ಕ್ವಾಡ್‌ಗಳು ರೂ. 56,01,100/- ನಗದು, ರೂ.10,190/- ಮೌಲ್ಯದ 33 ಲೀ. ಮದ್ಯ, ರೂ. 8,00,000/- ಮೌಲ್ಯದ 10 ವಾಹನ, ರೂ. 2,98,48,000/- ಮೌಲ್ಯದ 965 ಚೆಕ್, ರೂ.3,48,000/- ಮೌಲ್ಯದ 190 ಎಲ್‌ಪಿಜಿ ಸ್ಟೌವ್, ಸುಮಾರು ರೂ.65,000/- ಮೌಲ್ಯದ 900 ನೋಟ್‌ಬುಕ್, ರೂ.4,680/- ಮೌಲ್ಯದ 52 ಸೀರೆ ಮತ್ತು ಬ್ಲೌಸ್, ರೂ.1,800/- ಮೌಲ್ಯದ ಬಿಜೆಪಿ ಪಕ್ಷದ ಚಿಹ್ನೆ ಇರುವ 12 ಬ್ಯಾಗ್ ಮತ್ತು ರೂ.400/- ಮೌಲ್ಯದ ಟೀ ಶರ್ಟ್‌ಗಳನ್ನು ವಶಪಡಿಸಿಕೊಂಡಿವೆ. ಒಟ್ಟಾರೆ ರೂ.1,15,33,350/- ನಗದು, 556.785 ಲೀಟರ್ ಮದ್ಯ ಮತ್ತು ರೂ.13,00,72,980/- ಮೌಲ್ಯದ ಇತರೆ ವಸ್ತುಗಳು, ರೂ.1,00,96,560/- ಮೌಲ್ಯದ 37 ವಾಹನಗಳನ್ನು ವಶಪಡಿಸಿಕೊಂಡಿವೆ.

ಇತರೆ ಪೊಲೀಸ್ ಪ್ರಾಧಿಕಾರಗಳು ರೂ.7,00,000/- ನಗದು, 10 ಸೀರೆ, 160 ಲ್ಯಾಪ್‌ಟಾಪ್ ಮತ್ತು 485 ಲೀ.ಮದ್ಯವನ್ನು ವಶಪಡಿಸಿಕೊಂಡಿದೆ. ಒಟ್ಟಾರೆ ಫ್ಲೈಯಿಂಗ್ ಸ್ಕ್ವಾಡ್‌ಗಳ ತಂಡ, ಎಸ್‌ಎಸ್‌ಟಿ ಮತ್ತು ಇತರೆ ಪೊಲೀಸ್ ಪ್ರಾಧಿಕಾರಗಳು ರೂ.9,97,44,480/- ನಗದನ್ನು ವಶಪಡಿಸಿಕೊಂಡಿವೆ.

ಫ್ಲೈಯಿಂಗ್ ಸ್ಕ್ವಾಡ್‌ಗಳ ತಂಡ ಮತ್ತು ಇತರೆ ಪೊಲೀಸ್ ಪ್ರಾಧಿಕಾರಗಳು ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದಂತೆ ಕಳೆದ 24 ಗಂಟೆಗಳಲ್ಲಿ 29 ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಿದೆ. ಒಟ್ಟಾರೆಯಾಗಿ ಫ್ಲೈಯಿಂಗ್ ಸ್ಕ್ವಾಡ್‌ಗಳು 245 ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಿದೆ. ಎಸ್‌ಎಸ್‌ಟಿಗಳು ನಗದು ಮತ್ತಿತರ ವಸ್ತುಗಳಿಗೆ ಸಂಬಂಧಿಸಿದಂತೆ 3 ಪ್ರಕರಣಗಳೂ ಸೇರಿದಂತೆ ಒಟ್ಟು 56 ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಿದೆ.

ಕಳೆದ 24 ಗಂಟೆಗಳಲ್ಲಿ, ಅಬಕಾರಿ ಇಲಾಖೆಯು 3,472.01 ಲೀ. ಗಳಷ್ಟು ಐಎಂಎಲ್ ಮದ್ಯವನ್ನು ಮತ್ತು ರೂ.9,26,798/- ಮೌಲ್ಯದ ಇತರೆ ಮದ್ಯವನ್ನು ವಶಪಡಿಸಿಕೊಂಡು 77 ಪ್ರಕರಣಗಳನ್ನು ದಾಖಲಿಸಿದೆ. ಮದ್ಯದ ಪರವಾನಿಗೆಯನ್ನು ಉಲ್ಲಂಘಿಸಿದ 124 ಪ್ರಕರಣಗಳನ್ನು ದಾಖಲಿಸಲಾಗಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965ರ ಪರಿಚ್ಛೇದ 15 (ಎ) ಅನ್ವಯ 144 ಪ್ರಕರಣಗಳನ್ನು ದಾಖಲಿಸಿದೆ. ಒಟ್ಟಾರೆ ರೂ.61,80,645/- ಮೌಲ್ಯದ ಐಎಂಎಲ್ ಹಾಗೂ ಇತರೆ ಮದ್ಯ ಸೇರಿ 15,505.027 ಲೀ.ಗಳಷ್ಟು ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ. ಮದ್ಯದ ಪರವಾನಿಗೆಯನ್ನು ಉಲ್ಲಂಘಿಸಿದ 552 ಪ್ರಕರಣಗಳು, 859 ಪ್ರಕರಣಗಳು ಹಾಗೂ ಕರ್ನಾಟಕ ಅಬಕಾರಿ ಕಾಯ್ದೆ 1965ರ ಪರಿಚ್ಛೇದ 15 (ಎ) ಅನ್ವಯ 1339 ಪ್ರಕರಣಗಳನ್ನು ಹಾಗೂ ಎನ್‌ಡಿಪಿಎಸ್ ಕಾಯ್ದೆಯಡಿ 2 ಪ್ರಕರಣಗಳÀನ್ನು ದಾಖಲಿಸಲಾಗಿದೆ ಮತ್ತು 234 ವಿವಿಧ ಮಾದರಿಯ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

**ಕಾನೂನು ಮತ್ತು ಸುವ್ಯವಸ್ಥೆ**

948 ಪರವನಾಗಿ ಹೊಂದಿದ ಶಸ್ತ್ರಾಸ್ತ್ರಗಳನ್ನು ದಾಸ್ತಾನು ಮಾಡಲಾಗಿದೆ. ಕಳೆದ 24 ಗಂಟೆಗಳಲ್ಲಿ 1041 ವ್ಯಕ್ತಿಗಳಿಂದ ಮುಚ್ಚಳಿಕೆಯನ್ನು ಪಡೆಯಲಾಗಿದೆ ಹಾಗೂ 1868 ಜಾಮೀನು ರಹಿತ ವಾರೆಂಟ್‌ಗಳನ್ನು ಹೊರಡಿಸಲಾಗಿದೆ. ಸಿಆರ್‌ಪಿಸಿ ಕಾಯ್ದೆಯಡಿ 645 ಪ್ರಕರಣಗಳನ್ನು, 854 ನಾಕಾಗಳನ್ನು ಕಾರ್ಯ ನಿರ್ವಹಿಸುವಂತೆ ಮಾಡಲಾಗಿದೆ. ಒಟ್ಟಾರೆ 64,126 ಶಸ್ತ್ರಾಸ್ತ್ರಗಳನ್ನು ದಾಸ್ತಾನು ಮಾಡಿಕೊಳ್ಳಲಾಗಿದೆ. 04 ಶಸ್ತ್ರಾಸ್ತ್ರದ ಪರವಾನಿಗೆಯನ್ನು ರದ್ದುಗೊಳಿಸಲಾಗಿದೆ. ಇದುವರೆಗೆ 95,403 ಶಸ್ತ್ರಾಸ್ತ್ರಗಳನ್ನು ದಾಸ್ತಾನು ಮಾಡಕೊಳ್ಳಲಾಗಿದೆ. 50 ಶಸ್ತ್ರಾಸ್ತ್ರಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. 4 ಶಸ್ತ್ರಾಸ್ತ್ರ ಪರವಾನಗಿಯನ್ನು ರದ್ದುಗೊಳಿಸಲಾಗಿದ್ದು, ಸಿಆರ್‌ಪಿಸಿ ಕಾಯ್ದೆಯಡಿಯಲ್ಲಿ 11182 ಪ್ರಕರಣಗಳನ್ನು ದಾಖಲಿಸಲಾಗಿದೆ ಹಾಗೂ 9881 ವ್ಯಕ್ತಿಗಳಿಂದ ಮುಚ್ಚಳಿಕೆಯನ್ನು ಪಡೆಯಲಾಗಿದೆ 19785 ಜಾಮೀನು ರಹಿತ ವಾರೆಂಟ್‌ಗಳನ್ನು ಈವರೆಗೆ ಹೊರಡಿಸಲಾಗಿದೆ.

ಸಹಿ

(ಸಂಜೀವ್ ಕುಮಾರ್)

ಮುಖ್ಯ ಚುನಾವಣಾಧಿಕಾರಿಗಳು ಮತ್ತು

ಪದನಿಮಿತ್ತ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ

ಸಿಆಸುಇ, (ಚುನಾವಣೆಗಳು)